ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority


ಸಂಖ್ಯೆ : ಇಡಿ/ಕೆಇಎ/ಕೆಸೆಟ್/2025 ದಿನಾಂಕ:15.11.2025

## ಪ್ರಕಟಣೆ

### ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್)–2025ರ ಅಂತಿಮ ಕೀ ಉತ್ತರ ಮತ್ತು ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

*******

ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್)–2025ನ್ನು ದಿನಾಂಕ:02.11.2025 ರಂದು ನಡೆಸಲಾಗಿದ್ದು, ಸದರಿ ಪರೀಕ್ಷೆಯ ತಾತ್ಕಾಲಿಕ ಕೀ ಉತ್ತರಗಳನ್ನು ದಿನಾಂಕ:04.11.2025 ರಂದು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಸದರಿ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ:06.11.2025ರ ಸಂಜೆ 5.00 ಗಂಟೆಯೊಳಗೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಪ್ರಕಟಿತ ಕೀ ಉತ್ತರಗಳಿಗೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಶಿಫಾರಸ್ಸಿನಂತೆ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ: 12.11.2025 ರಂದು ಮತ್ತು ಅಂತಿಮ ಕೀ ಉತ್ತರಗಳನ್ನು ದಿನಾಂಕ:15.11.2025 ರಂದು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಅಂತಿಮ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಸದರಿ ತಾತ್ಕಾಲಿಕ ಅಂಕಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಲಿಂಕ್ ಮೂಲಕ **ದಿನಾಂಕ:17.11.2025ರ ಮಧ್ಯಾಹ್ನ 12.00** ರೊಳಗೆ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

**ಕೀ ಉತ್ತರಗಳಿಗೆ ಸಂಬಂಧಿಸಿದ ಅಥವಾ ಪೂರಕ ದಾಖಲೆಗಳಿಲ್ಲದೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.**

ಕಾರ್ಯನಿರ್ವಾಹಕ ನಿರ್ದೇಶಕರು


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in